# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ-583105.

**ಕುಲಸಚಿವರು (ಮೌಲ್ಯಮಾಪನ)** **ದೂರವಾಣಿ: 08392-241011**


ಸಂಖ್ಯೆ: ವಿಶ್ರೀಕೃವಿಬ/ಪರೀಕ್ಷಾ/ಸ್ನಾತಕೋತ್ತರ/ಮ.ಮೌ/2019-20/2893 ದಿನಾಂಕ: 31.01.2020

## ಅಧಿಸೂಚನೆ

**ವಿಷಯ:** ಡಿಸೆಂಬರ್-2019ರ ತಿಂಗಳಿನಲ್ಲಿ ಜರುಗಿದ ಸ್ನಾತಕೋತ್ತರ ಪದವಿಯ 1ನೇ, 3ನೇ ಮತ್ತು 5ನೇ ಸೆಮಿಸ್ಟರ್‌ನ ವಿವಿಧ ಕೋರ್ಸ್‌ಗಳ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಗಳ ಅನುಮೋದನೆಯ ದಿನಾಂಕ: 30.01.2020.

****

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಡಿಸೆಂಬರ್-2019ರ ತಿಂಗಳಿನಲ್ಲಿ ಜರುಗಿದ ಸ್ನಾತಕೋತ್ತರ ಪದವಿ ಪರೀಕ್ಷೆಗಳ 1ನೇ, 3ನೇ ಮತ್ತು 5ನೇ ಸೆಮಿಸ್ಟರ್‌ನ ವಿವಿಧ ಕೋರ್ಸ್‌ಗಳ ಫಲಿತಾಂಶ ಈಗಾಗಲೇ ಪ್ರಕಟವಾಗಿರುವ ಹಿನ್ನಲೆಯಲ್ಲಿ, ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿಸುವ ದಿನಾಂಕಗಳು ಈ ಕೆಳಗಿನಂತಿವೆ.

| ಕ್ರ.ಸಂ. | ವಿವರ | ಶುಲ್ಕದ ವಿವರ | ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ |
|---|---|---|---|
| 01. | ಮರು ಮೌಲ್ಯಮಾಪನ | ಒಂದು ವಿಷಯಕ್ಕೆ ರೂ. 1,397/- | 15.02.2020 |

**ಸೂಚನೆಗಳು:**

1. ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಬಯಸುವ ವಿದ್ಯಾರ್ಥಿಗಳು ವಿಶ್ವವಿದ್ಯಾಲಯದ ವೆಬ್‌ಸೈಟ್ (www.vskub.ac.in & results.logisys.org/vskub)ನ್ನು ಸಂಪರ್ಕಿಸಿ, ಆನ್‌ಲೈನ್ (Online) ಮುಖಾಂತರ ನಿಗಧಿತ ದಿನಾಂಕದೊಳಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
2. ವಿದ್ಯಾರ್ಥಿಗಳು ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವ ವಿಷಯವನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು.
3. ವಿದ್ಯಾರ್ಥಿಗಳು ಶುಲ್ಕ ಪಾವತಿಸಿದ ನಂತರ ಚಲನ್‌ನ್ನು ಪಡೆದು ಅಂಚೆ ಕಛೇರಿಯಲ್ಲಿ ಶುಲ್ಕವನ್ನು ಭರಿಸಿ, ಅರ್ಜಿ ಹಾಗೂ ಚಲನ್ ಪ್ರತಿಯನ್ನು ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು.
4. ಶುಲ್ಕ ಪಾವತಿಸಿದ ನಂತರ ಬರುವ Unique Application Number ನ್ನು ವಿಶ್ವವಿದ್ಯಾಲಯದ ಜೊತೆ ಮಾಡುವ ಪತ್ರ ವ್ಯವಹಾರಗಳಲ್ಲಿ ನಮೂದಿಸಿಬೇಕು.
5. ವಿದ್ಯಾರ್ಥಿಗಳು ಅರ್ಜಿ ಮತ್ತು ಚಲನ್‌ನ ಒಂದು ಪ್ರತಿಯನ್ನು ತಮ್ಮ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯದ ಪ್ರಾಂಶುಪಾಲರಿಗೆ ಸಲ್ಲಿಸುವುದು.
6. ಮರು ಮೌಲ್ಯಮಾಪನದ ಫಲಿತಾಂಶವನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅರ್ಜಿ ಶುಲ್ಕವನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.
7. ಯಾವುದೇ ಅಭ್ಯರ್ಥಿಯು ತನ್ನ ನೋಂದಣಿ ಸಂಖ್ಯೆ ಮತ್ತು ವಿಷಯಗಳ ಆಯ್ಕೆಗಳನ್ನು ಸರಿಯಾಗಿ ನಮೂದಿಸದಿದ್ದಲ್ಲಿ ಅಥವಾ ಬೇರೆ ನೋಂದಣಿ ಸಂಖ್ಯೆ, ಸಂಬಂಧವಲ್ಲದ ವಿಷಯಗಳನ್ನು ನಮೂದಿಸಿದರೆ ಅದಕ್ಕೆ ಅಭ್ಯರ್ಥಿಯೇ ಹೊಣೆ. ಅಂತಹ ಪ್ರಕರಣಗಳನ್ನು ವಿಶ್ವವಿದ್ಯಾಲಯ ಸರಿಪಡಿಸಲಾಗುವುದಿಲ್ಲ.

31/1/2020

**ಕುಲಸಚಿವರು (ಮೌಲ್ಯಮಾಪನ)**
**ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ,**
**ಬಳ್ಳಾರಿ.**

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.
2. ಮಾನ್ಯ ಕುಲಸಚಿವರು, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.
3. ಹಣಕಾಸು ಅಧಿಕಾರಿಗಳು, ವಿ.ಶ್ರೀ.ಕೃ. ವಿಶ್ವವಿದ್ಯಾಲಯ, ಬಳ್ಳಾರಿ ರವರ ಮಾಹಿತಿಗಾಗಿ.
4. ಎಲ್ಲ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ಸಂಯೋಜಕರು, ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳ ಮಾಹಿತಿಗಾಗಿ.
5. ಚೀಫ್ ಪೋಸ್ಟ್ ಮಾಸ್ಟರ್ ಆಫ್ ಜನರಲ್, ಕರ್ನಾಟಕ ಸರ್ಕಲ್, ಬೆಂಗಳೂರು-560 001.
6. ಸೂಪರಿಂಟೆಂಡೆಂಟ್ ಆಫ್ ಪೋಸ್ಟ್ ಆಫೀಸ್, ಬಳ್ಳಾರಿ ಶಾಖೆ, ಬಳ್ಳಾರಿ-583 001.
7. ಸಬ್ ಪೋಸ್ಟ್ ಮಾಸ್ಟರ್, ಜ್ಞಾನಸಾಗರ ಪೋಸ್ಟ್ ಆಫೀಸ್, ವಿ.ಶ್ರೀ.ಕೃ. ವಿಶ್ವವಿದ್ಯಾಲಯ ಆವರಣ, ವಿನಾಯಕ ನಗರ, ಬಳ್ಳಾರಿ-583 105.
8. ಮೇ// ಲಾಜಿಸಿಸ್, ಬೆಂಗಳೂರು, ಶಾಖೆ ವಿ.ಶ್ರೀ.ಕೃ. ವಿಶ್ವವಿದ್ಯಾಲಯ ಆವರಣ, ಬಳ್ಳಾರಿ.
9. ಕಛೇರಿ ಪ್ರತಿ.